ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್:http://www.kodagu.nic.in

---

ಸಂಖ್ಯೆ:ಪ್ರವಿ/4/2018-19

ದಿನಾಂಕ: 21-08-2018

# ಅಧಿಕೃತ ಜ್ಞಾಪನ

ವಿಷಯ: ಕೊಡಗು ಜಿಲ್ಲೆಯಾದ್ಯಂತ ಭಾರಿ ಮಳೆಯಿಂದ ಸಂತ್ರಸ್ಥರಾದವರಿಗೆ ತುರ್ತಾಗಿ ಪರಿಹಾರ ವಿತರಿಸುವ ಸಂಬಂಧ ಖಜಾನೆ ಮತ್ತು ಬ್ಯಾಂಕ್‌ಗಳು ಸಾರ್ವಜನಿಕ ರಜಾ ದಿನಗಳಂದು ಕಡ್ಡಾಯವಾಗಿ ಕಾರ್ಯನಿರ್ವಹಿಸುವ ಬಗ್ಗೆ.

-------

ಕೊಡಗು ಜಿಲ್ಲೆಯಾದ್ಯಂತ ಭಾರೀ ಮಳೆಯಾಗುತ್ತಿದ್ದು, ಗಾಳಿ ಮಳೆಯಿಂದ ನೆಲ ಕುಸಿದು ಹಲವಾರು ಮನೆಗಳಿಗೆ ಹಾನಿಯಾಗಿರುತ್ತದೆ. ಪ್ರಕೃತಿ ವಿಕೋಪದಿಂದ ಸಂತ್ರಸ್ಥರಾದವರಿಗೆ ಗಂಜಿ ಕೇಂದ್ರಗಳಲ್ಲಿ ಆಶ್ರಯ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ.

ಮುಂದುವರೆದು, ಪ್ರಕೃತಿ ವಿಕೋಪದಿಂದ ಸಂತ್ರಸ್ಥರಾದವರಿಗೆ ಪರಿಹಾರ ವಿತರಣೆ, ಅಗತ್ಯ ವಸ್ತುಗಳ ಪೂರೈಕೆ/ಖರೀದಿ, ಇಲಾಖಾವಾರು ತುರ್ತು ಕಾರ್ಯಗಳಿಗೆ ಅನುದಾನ ಬಿಡುಗಡೆ ಮುಂತಾದ ವಿಚಾರಗಳ ಹಿನ್ನಲೆಯಲ್ಲಿ ಹಾಗು ಪ್ರಸ್ತುತ ಜಿಲ್ಲೆಯಲ್ಲಿ ನಿರ್ಮಾಣವಾಗಿರುವ ಸ್ಥಿತಿಯಿಂದ ಕೊಡಗು ಜಿಲ್ಲೆಯನ್ನು ರೆಡ್ ಅಲರ್ಟ್ ಎಂದು ಸರ್ಕಾರ ಘೋಷಿಸಿರುವುದರಿಂದ ಜಿಲ್ಲೆಯ ಎಲ್ಲಾ ಬ್ಯಾಂಕ್‌ಗಳು ಮತ್ತು ಖಜಾನೆಗಳ ಸಿಬ್ಬಂದಿಗಳು ದಿನಾಂಕ 22.08.2018 ರಿಂದ 25.08.2018ರವರೆಗೆ ಸಾರ್ವತ್ರಿಕ ರಜೆಗಳು ಸೇರಿದಂತೆ ಯಾವುದೇ ರಜೆಯ ಮೇಲೆ ತೆರಳದೆ ಕಚೇರಿ ಕರ್ತವ್ಯ ನಿರ್ವಹಿಸಲು ಆದೇಶಿಸಿದೆ.

ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ ಹಾಗೂ
ಸದಸ್ಯ ಕಾರ್ಯದರ್ಶಿ,
ಜಿಲ್ಲಾ ಮಟ್ಟದ ಪ್ರಕೃತಿ ವಿಕೋಪ ಪರಿಹಾರ ಸಮಿತಿ,
ಮಡಿಕೇರಿ

ಪ್ರತಿಯನ್ನು:

1. ಜಿಲ್ಲೆಯ ಎಲ್ಲಾ ಬ್ಯಾಂಕ್ ಶಾಖೆಗಳ ವ್ಯವಸ್ಥಾಪಕರಿಗೆ ಲೀಡ್ ಬ್ಯಾಂಕ್ ವ್ಯವಸ್ಥಾಪಕರ ಮುಖಾಂತರ ಸೂಕ್ತ ಕ್ರಮಕ್ಕಾಗಿ.
2. ಜಿಲ್ಲೆಯ ಎಲ್ಲಾ ಖಜಾನಾಧಿಕಾರಿಗಳಿಗೆ ಜಿಲ್ಲಾ ಖಜಣಾಧಿಕಾರಿಗಳ ಮುಖಾಂತರ ಮುಖಾಂತರ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ